399

# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 547 |
| ಉತ್ತರಿಸಬೇಕಾದ ದಿನಾಂಕ | : 11.12.2025 |
| ಸದಸ್ಯರ ಹೆಸರು | : ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : ಮಾನ್ಯ ಮುಖ್ಯಮಂತ್ರಿಯವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕಳೆದ 3 ವರ್ಷಗಳಲ್ಲಿ ಯಾವ ಯಾವ ಕ್ರೀಡೆಗಳನ್ನು ವಿಜಯಪುರ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದೆ; ಕ್ರೀಡಾಂಗಣ ನಿರ್ವಹಣೆಗಾಗಿ ವಾರ್ಷಿಕ ನೀಡುತ್ತಿರುವ ಅನುದಾನ ಎಷ್ಟು (ಸಂಪೂರ್ಣ ವಿವರ ನೀಡುವುದು ) | ವಿಜಯಪುರ ಜಿಲ್ಲಾ ಕ್ರೀಡಾಂಗಣದಲ್ಲಿ ತಾಲ್ಲೂಕು, ಜಿಲ್ಲಾ ಹಾಗೂ ವಿಭಾಗ ಮಟ್ಟದ ದಸರಾ ಕ್ರೀಡಾಕೂಟಗಳು, ವಿಕಲಚೇತನರ ಕ್ರೀಡಾಕೂಟ, ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ, ಕಂದಾಯ ನೌಕರರ ಕ್ರೀಡಾಕೂಟ, ರಾಷ್ಟ್ರೀಯ ಕ್ರೀಡಾ ದಿನಾಚರಣೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕ್ರೀಡಾಕೂಟಗಳನ್ನು ಆಯೋಜಿಸಲಾಗಿದೆ.<br><br>ಜಿಲ್ಲಾ ಕ್ರೀಡಾಂಗಣ ನಿರ್ವಹಣೆಗಾಗಿ ಕಳೆದ ಮೂರು ವರ್ಷಗಳಲ್ಲಿ ನೀಡಿರುವ ಅನುದಾನದ ವಿವರ ಇಂತಿದೆ.<br>**(ರೂ. ಲಕ್ಷಗಳಲ್ಲಿ)** |

| ಕ್ರ. ಸಂ | ವರ್ಷ | ಬಿಡುಗಡೆ ಮೊತ್ತ | ವೆಚ್ಚ ಭರಿಸಿದ ಮೊತ್ತ |
|---|---|---|---|
| 1 | 2022-23 | 34.08 | 31.42 |
| 2 | 2023-24 | 42.32 | 42.29 |
| 3 | 2024-25 | 42.58 | 40.14 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಆ | ಜಿಲ್ಲೆಯಲ್ಲಿ ಇರುವ ಒಟ್ಟು ಕ್ರೀಡಾ ಶಾಲೆಗಳ ಸಂಖ್ಯೆ ಎಷ್ಟು ಅವು ಎಲ್ಲೆಲ್ಲಿ ಕಾರ್ಯ ನಿರ್ವಹಿಸುತ್ತಿವೆ: ಅಲ್ಲಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು (ಸಂಪೂರ್ಣ ವಿವರ ನೀಡುವುದು) | ವಿಜಯಪುರ ಜಿಲ್ಲೆಯ ವಿಜಯಪುರದಲ್ಲಿ ಒಂದು ಜಿಲ್ಲಾ ಕ್ರೀಡಾ ವಸತಿ ನಿಲಯ ಕಾರ್ಯನಿರ್ವಹಿಸುತ್ತಿದ್ದು, ಸದರಿ ವಸತಿ ನಿಲಯದಲ್ಲಿ ಹೊರಗುತ್ತಿಗೆ ಆಧಾರದಲ್ಲಿ ಒಟ್ಟು 07 ಸಿಬ್ಬಂದಿ ಕಾರ್ಯ ನಿರ್ವಹಿಸುತ್ತಿದ್ದು, ವಿವರ ಇಂತಿದೆ. |

| ಕ್ರ. ಸಂ. | ಸಿಬ್ಬಂದಿಗಳ ವಿವರ | ಸಂಖ್ಯೆ |
|---|---|---|
| 1 | ಕ್ಷೇಮಪಾಲಕರು | 01 |
| 2 | ಕೇರ್ ಟೇಕರ್ | 02 |
| 3 | ಸ್ವಚ್ಛತಾ ಸಿಬ್ಬಂದಿ | 01 |
| 4 | ಭದ್ರತಾ ಸಿಬ್ಬಂದಿಗಳು | 03 |
| | **ಒಟ್ಟು** | **07** |

ಅಲ್ಲದೇ, ಕರ್ನಾಟಕ ಕ್ರೀಡಾ ಪ್ರಾಧಿಕಾರದ ಒಟ್ಟು 04 ತರಬೇತುದಾರರು ಕಾರ್ಯನಿರ್ವಹಿಸುತ್ತಿದ್ದು, ವಿವರ ಇಂತಿದೆ.

| | | |
|---|---|---|
| | | <table><tr><th>ಕ್ರಸ</th><th>ತರಬೇತುದಾರರ ವಿವರ</th><th>ಸಂಖ್ಯೆ</th></tr><tr><td>1</td><td>ಸ್ಕೈಕ್ಲಿಂಗ್ ತರಬೇತುದಾರರು</td><td>02</td></tr><tr><td>2</td><td>ಬಾಸ್ಕೆಟ್‌ಬಾಲ್ ತರಬೇತುದಾರರು</td><td>01</td></tr><tr><td>3</td><td>ವಾಲಿಬಾಲ್ ತರಬೇತುದಾರರು</td><td>01</td></tr><tr><td></td><td>ಒಟ್ಟು</td><td>04</td></tr></table> |
| ಇ | ಸದರಿ ಜಿಲ್ಲೆಯಲ್ಲಿ ಎಷ್ಟು ತಾಲ್ಲೂಕು ಕ್ರೀಡಾಂಗಣಗಳಿವೆ ಹಾಗೂ ಅಲ್ಲಿ ಇರುವ ತರಬೇತಿದಾರರ ಸಂಖ್ಯೆ ಎಷ್ಟು; ಕ್ರೀಡಾಂಗಣ ಇಲ್ಲದಿರುವ ತಾಲ್ಲೂಕುಗಳಲ್ಲಿ ಕ್ರೀಡಾಂಗಣ ನಿರ್ಮಾಣ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು: | ವಿಜಯಪುರ ಜಿಲ್ಲೆಯ ಇಂಡಿ ಮತ್ತು ಸಿಂದಗಿ ಗಳಲ್ಲಿ ತಾಲ್ಲೂಕು ಕ್ರೀಡಾಂಗಣಗಳನ್ನು ನಿರ್ಮಿಸಲಾಗಿದ್ದು, ಸದರಿ ತಾಲ್ಲೂಕು ಕ್ರೀಡಾಂಗಣಗಳಲ್ಲಿ ಪ್ರಸ್ತುತ ಯಾವುದೇ ತರಬೇತುದಾರರು ಕಾರ್ಯನಿರ್ವಹಿಸುತ್ತಿರುವುದಿಲ್ಲ.<br><br>ಸದರಿ ಜಿಲ್ಲೆಯ ತಾಲ್ಲೂಕು ಕ್ರೀಡಾಂಗಣ ನಿರ್ಮಾಣಕ್ಕೆ ಸಂಬಂಧಿಸಿದಂತೆ ಕೈಗೊಂಡ ಕ್ರಮದ ಬಗ್ಗೆ **ಅನುಬಂಧ-01** ರಲ್ಲಿ ವಿವರ ನೀಡಲಾಗಿದೆ. |
| ಈ | ಗ್ರಾಮೀಣ ಭಾಗದ ಮಕ್ಕಳ ಕ್ರೀಡೆಯನ್ನು ಉತ್ತೇಜಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ವಿವರ ನೀಡುವುದು) | ಗ್ರಾಮೀಣ ಭಾಗದ ಮಕ್ಕಳ ಕ್ರೀಡೆಯನ್ನು ಉತ್ತೇಜಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳ ವಿವರಗಳನ್ನು **ಅನುಬಂಧ-2** ರಲ್ಲಿ ನೀಡಲಾಗಿದೆ. |

**ಸಂಖ್ಯೆ: ವೈಎಸ್‌ಡಿ-ಇಬಿಬಿ/148/2025**

**(ಸಿದ್ದರಾಮಯ್ಯ)**
ಮುಖ್ಯಮಂತ್ರಿ

# ಅನುಬಂಧ-1

## ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ

## ವಿಜಯಪುರ ಜಿಲ್ಲೆಯ ವಿವಿಧ ತಾಲ್ಲೂಕು ಕ್ರೀಡಾಂಗಣ ನಿರ್ಮಾಣಕ್ಕೆ ಸಂಬಂಧಿಸಿದಂತೆ ಕೈಗೊಂಡಿರುವ ಕ್ರಮದ ವಿವರ

| ಕ್ರ. ಸಂ. | ತಾಲ್ಲೂಕುಗಳ ಹೆಸರು | ಸರ್ವೆ ನಂ/ಎಕರೆ | ಕೈಗೊಂಡಿರುವ ಕ್ರಮ |
|---|---|---|---|
| 01 | ಮುದ್ದೇಬಿಹಾಳ | ಬಿದರಕುಂದಿ ಗ್ರಾಮ 129/1, 10 ಎಕರೆ | ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ಮುದ್ದೇಬಿಹಾಳ ತಾಲ್ಲೂಕು ಕ್ರೀಡಾಂಗಣ ನಿರ್ಮಾಣ ಕಾಮಗಾರಿಯನ್ನು ಒಟ್ಟಾರೆ ರೂ 250.00 ಲಕ್ಷಗಳ ವೆಚ್ಚದಲ್ಲಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಿ, ಇದುವರೆಗೂ ರೂ 170.00 ಲಕ್ಷಗಳನ್ನು ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಯಮಿತ (ಕೆ.ಆರ್.ಐ.ಡಿ.ಎಲ್.) ಸಂಸ್ಥೆಗೆ ಬಿಡುಗಡೆ ಮಾಡಲಾಗಿರುತ್ತದೆ. ಪ್ರಸ್ತುತ ಕಾಮಗಾರಿ ಪ್ರಗತಿಯಲ್ಲಿರುತ್ತದೆ.<br><br>ಪ್ರಸಕ್ತ ಸಾಲಿನ ಕ್ರೀಯಾಯೋಜನೆಯಲ್ಲಿ ಸದರಿ ಕಾಮಗಾರಿಗೆ ಬಿಡುಗಡೆ ಮಾಡಲು ರೂ 50.00 ಲಕ್ಷಗಳನ್ನು ಹಂಚಿಕೆ ಮಾಡಿಕೊಳ್ಳಲಾಗಿರುತ್ತದೆ. |
| 02 | ಬಸವನ ಬಾಗೇವಾಡಿ | ಟಕ್ಕಳಕಿ ಸರ್ವೆ ನಂ: 147 6 ಎಕರೆ | 2025-26ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ-394ರ ಅನುಷ್ಠಾನ ಸಂಬಂಧ 12 ತಾಲ್ಲೂಕು ಕೇಂದ್ರುಗಳಲ್ಲಿ ತಲಾ ರೂ.2.00 ಕೋಟಿ ವೆಚ್ಚದಲ್ಲಿ ತಾಲ್ಲೂಕು ಕ್ರೀಡಾಂಗಣ ನಿರ್ಮಿಸಲು ಅನುಮೋದನೆ ನೀಡಿ ದಿನಾಂಕ:15.05.2025ರಂದು ಸರ್ಕಾರದ ಆದೇಶ ಹೊರಡಿಸಲಾಗಿದೆ. 12 ತಾಲ್ಲೂಕು ಕೇಂದ್ರುಗಳಲ್ಲಿ ಸದರಿ ತಾಲ್ಲೂಕು ಸೇರ್ಪಡೆಗೊಂಡಿರುತ್ತದೆ.<br><br>ಪ್ರಸಕ್ತ ಸಾಲಿನ ಕ್ರೀಯಾಯೋಜನೆಯಲ್ಲಿ ಸದರಿ ಕಾಮಗಾರಿಗೆ ರೂ 200.00 ಲಕ್ಷಗಳನ್ನು ಮಂಜೂರು ಮಾಡಿ, ಬಿಡುಗಡೆ ಮಾಡಲು ರೂ 50.00 ಲಕ್ಷಗಳನ್ನು ಹಂಚಿಕೆ ಮಾಡಿಕೊಳ್ಳಲಾಗಿರುತ್ತದೆ.<br><br>ಸದರಿ ಕಾಮಗಾರಿಯನ್ನು ಕೈಗೊಳ್ಳಲು ಸ್ಥಳ ಪರಿಶೀಲನೆ ಮಾಡಿ, ಅಂದಾಜು ಪಟ್ಟಿ ತಯಾರಿಸಲಾಗುತ್ತಿದ್ದು, ಶೀಘ್ರದಲ್ಲಿ ಟೆಂಡರ್ ಆಹ್ವಾನಿಸಿ, ನಿಯಮಾನುಸಾರ ಕಾಮಗಾರಿ ಪ್ರಾರಂಭಿಸಲಾಗುವುದು. |

| | | | |
|---|---|---|---|
| 03 | ಬಬಲೇಶ್ವರ | ಸರ್ವೇ ನಂ: 82, ಕ್ಷೇತ್ರ 25 ಎಕರೆ 01 ಗುಂಟೆ ಗಾಯರಾಣ ಜಮೀನಿನ ಪೈಕಿ 8 ಎಕರೆ ನಿವೇಶನ | 2025-26ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ-394ರ ಅನುಷ್ಠಾನ ಸಂಬಂಧ 12 ತಾಲ್ಲೂಕು ಕೇಂದ್ರಗಳಲ್ಲಿ ತಲಾ ರೂ.2.00 ಕೋಟಿ ವೆಚ್ಚದಲ್ಲಿ ತಾಲ್ಲೂಕು ಕ್ರೀಡಾಂಗಣ ನಿರ್ಮಿಸಲು ಅನುಮೋದನೆ ನೀಡಿ ದಿನಾಂಕ:15.05.2025ರಂದು ಸರ್ಕಾರದ ಆದೇಶ ಹೊರಡಿಸಲಾಗಿದೆ. 12 ತಾಲ್ಲೂಕು ಕೇಂದ್ರಗಳಲ್ಲಿ ಸದರಿ ತಾಲ್ಲೂಕು ಸೇರ್ಪಡೆಗೊಂಡಿರುತ್ತದೆ.<br><br>ಪ್ರಸಕ್ತ ಸಾಲಿನ ಕ್ರಿಯಾ ಯೋಜನೆಯಲ್ಲಿ ಸದರಿ ಕಾಮಗಾರಿಗೆ ರೂ 200.00 ಲಕ್ಷಗಳನ್ನು ಮಂಜೂರು ಮಾಡಿ, ಬಿಡುಗಡೆ ಮಾಡಲು ರೂ 50.00 ಲಕ್ಷಗಳನ್ನು ಹಂಚಿಕೆ ಮಾಡಿಕೊಳ್ಳಲಾಗಿರುತ್ತದೆ.<br><br>ಸದರಿ ಕಾಮಗಾರಿಯನ್ನು ಕೈಗೊಳ್ಳಲು ಸ್ಥಳ ಪರಿಶೀಲನೆ ಮಾಡಿ, ಅಂದಾಜು ಪಟ್ಟಿ ತಯಾರಿಸಲಾಗುತ್ತಿದ್ದು, ಶೀಘ್ರದಲ್ಲಿ ಟೆಂಡರ್ ಆಹ್ವಾನಿಸಿ, ನಿಯಮಾನುಸಾರ ಕಾಮಗಾರಿ ಪ್ರಾರಂಭಿಸಲಾಗುವುದು. |
| 04 | ನಿಡಗುಂದಿ | ದೇವಲಾಪೂರ ಗ್ರಾಮದ ಸರ್ವೇ ನಂ 47/1 ಕ್ಷೇತ್ರ 41 ಎಕರೆ 12 ಗುಂಟೆ ಪೈಕಿ 6 ಎಕರೆ 20 ಗುಂಟೆ ನಿವೇಶನ | 2025-26ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ-394ರ ಅನುಷ್ಠಾನ ಸಂಬಂಧ 12 ತಾಲ್ಲೂಕು ಕೇಂದ್ರಗಳಲ್ಲಿ ತಲಾ ರೂ.2.00 ಕೋಟಿ ವೆಚ್ಚದಲ್ಲಿ ತಾಲ್ಲೂಕು ಕ್ರೀಡಾಂಗಣ ನಿರ್ಮಿಸಲು ಅನುಮೋದನೆ ನೀಡಿ ದಿನಾಂಕ:15.05.2025ರಂದು ಸರ್ಕಾರದ ಆದೇಶ ಹೊರಡಿಸಲಾಗಿದೆ. 12 ತಾಲ್ಲೂಕು ಕೇಂದ್ರಗಳಲ್ಲಿ ಸದರಿ ತಾಲ್ಲೂಕು ಸೇರ್ಪಡೆಗೊಂಡಿರುತ್ತದೆ.<br><br>ಪ್ರಸಕ್ತ ಸಾಲಿನ ಕ್ರೀಯಾಯೋಜನೆಯಲ್ಲಿ ಸದರಿ ಕಾಮಗಾರಿಗೆ ರೂ 200.00 ಲಕ್ಷಗಳನ್ನು ಮಂಜೂರು ಮಾಡಿ, ಬಿಡುಗಡೆ ಮಾಡಲು ರೂ 50.00 ಲಕ್ಷಗಳನ್ನು ಹಂಚಿಕೆ ಮಾಡಿಕೊಳ್ಳಲಾಗಿರುತ್ತದೆ.<br><br>ಸದರಿ ಕಾಮಗಾರಿಯನ್ನು ಕೈಗೊಳ್ಳಲು ಸ್ಥಳ ಪರಿಶೀಲನೆ ಮಾಡಿ, ಅಂದಾಜು ಪಟ್ಟಿ ತಯಾರಿಸಲಾಗುತ್ತಿದ್ದು, ಶೀಘ್ರದಲ್ಲಿ ಟೆಂಡರ್ ಆಹ್ವಾನಿಸಿ, ನಿಯಮಾನುಸಾರ ಕಾಮಗಾರಿ ಪ್ರಾರಂಭಿಸಲಾಗುವುದು. |
| 05 | ದೇವರ ಹಿಪ್ಪರಗಿ | ಇಂಗಳಗಿ ಸರ್ವೇ ನಂ 106 ಕ್ಷೇತ್ರ 11 ಎಕರೆ 36 ಗುಂಟೆ ಪೈಕಿ 8 ಎಕರೆ | ದೇವರ ಹಿಪ್ಪರಗಿ ತಾಲ್ಲೂಕಿನಲ್ಲಿ ತಾಲ್ಲೂಕು ಕ್ರೀಡಾಂಗಣ ನಿರ್ಮಾಣಕ್ಕಾಗಿ ನಿವೇಶನ ಲಭ್ಯವಿದ್ದು, ಸಂಬಂಧಪಟ್ಟ ತಹಶೀಲ್ದಾರ್ ರವರಿಗೆ ಹದ್ದುಬಸ್ತು ಗುರುತಿಸಿ ಪಿ.ಟಿ. ಶೀಟ್ ನೊಂದಿಗೆ ಕ್ರೀಡಾ ಇಲಾಖೆಗೆ ಹಸ್ತಾಂತರಿಸಲು ಪತ್ರ ಬರೆಯಲಾಗಿದೆ. |
| 06 | ಆಲಮೇಲ | ಸರ್ವೇ ನಂ 606/*/* ಕ್ಷೇತ್ರ: 06 ಎಕರೆ 30 ಗುಂಟೆ | ಆಲಮೇಲ ತಾಲ್ಲೂಕಿನಲ್ಲಿ ತಾಲ್ಲೂಕು ಕ್ರೀಡಾಂಗಣ (ಒಳಾಂಗಣ/ಹೊರಾಂಗಣ) ನಿರ್ಮಾಣ ಕಾಮಗಾರಿಯನ್ನು ರೂ 300.00 ಲಕ್ಷಗಳ ವೆಚ್ಚದಲ್ಲಿ ಕೈಗೊಳ್ಳಲು ಸರ್ಕಾರದ ಆದೇಶ ಸಂ: ವೈಎಸ್ ಡಿ-ಇಪಿಇ/66/2025, ದಿನಾಂಕ: 05.12.2025ರನ್ವಯ ಆಡಳಿತಾತ್ಮಕ ಅನುಮೋದನೆ |

| | | | |
|---|---|---|---|
| | | | ನೀಡಲಾಗಿರುತ್ತದೆ.<br>ಸದರಿ ಕಾಮಗಾರಿಯನ್ನು ಕೈಗೊಳ್ಳಲು ಸ್ಥಳ ಪರಿಶೀಲನೆ ಮಾಡಿ, ಅಂದಾಜು ಪಟ್ಟಿ ತಯಾರಿಸಲಾಗುತ್ತಿದ್ದು, ಶೀಘ್ರದಲ್ಲಿ ಟೆಂಡರ್ ಆಹ್ವಾನಿಸಿ, ನಿಯಮಾನುಸಾರ ಕಾಮಗಾರಿ ಪ್ರಾರಂಭಿಸಲಾಗುವುದು. |
| 07 | ಚಡಚಣ | ಕೊಂಕಣಗಾಂವ ಗ್ರಾಮದ ರಿಸನಂ: 62/*/* ರ ಕ್ಷೇತ್ರ 28 ಎ-33 ಗುಂಟೆ ಗಾಯರಾಣಾ ಜಮೀನಿನ ಪೈಕಿ 8 ಎಕರೆ | ಚಡಚಣ ತಾಲ್ಲೂಕಿನ ಕೊಂಕಣಗಾಂವ್ ಗ್ರಾಮದ ರಿಸನಂ: 62/*/* ರ ಕ್ಷೇತ್ರ 28 ಎ-33 ಗು ಗಾಯರಾಣಾ ಜಮೀನಿನ ಪೈಕಿ 08 ಎಕರೆ ನಿವೇಶನವನ್ನು ತಾಲ್ಲೂಕು ಮಟ್ಟದ ಕ್ರೀಡಾಂಗಣ ನಿರ್ಮಾಣಕ್ಕಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಮಂಜೂರು ಮಾಡಲು ಜಿಲ್ಲಾಧಿಕಾರಿಗಳು, ವಿಜಯಪುರ ಇವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. |
| 08 | ತಿಕೋಟ | -- | ತಾಲ್ಲೂಕು ಮಟ್ಟದ ಕ್ರೀಡಾಂಗಣ ನಿರ್ಮಾಣಕ್ಕಾಗಿ ಸೂಕ್ತ ನಿವೇಶನ ಗುರುತಿಸಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಹಸ್ತಾಂತರಿಸುವಂತೆ ಜಿಲ್ಲಾಧಿಕಾರಿಗಳು, ವಿಜಯಪುರ ಜಿಲ್ಲೆ ಇವರಿಗೆ ಕೋರಲಾಗಿದೆ. |
| 09 | ಕೊಲ್ಹಾರ | -- | ತಾಲ್ಲೂಕು ಮಟ್ಟದ ಕ್ರೀಡಾಂಗಣ ನಿರ್ಮಾಣಕ್ಕಾಗಿ ಸೂಕ್ತ ನಿವೇಶನ ಗುರುತಿಸಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಹಸ್ತಾಂತರಿಸುವಂತೆ ಜಿಲ್ಲಾಧಿಕಾರಿಗಳು, ವಿಜಯಪುರ ಜಿಲ್ಲೆ ಇವರಿಗೆ ಕೋರಲಾಗಿದೆ. |
| 10 | ತಾಳಿಕೋಟಿ | -- | ತಾಲ್ಲೂಕು ಮಟ್ಟದ ಕ್ರೀಡಾಂಗಣ ನಿರ್ಮಾಣಕ್ಕಾಗಿ ಸೂಕ್ತ ನಿವೇಶನ ಗುರುತಿಸಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಹಸ್ತಾಂತರಿಸುವಂತೆ ಜಿಲ್ಲಾಧಿಕಾರಿಗಳು, ವಿಜಯಪುರ ಜಿಲ್ಲೆ ಇವರಿಗೆ ಕೋರಲಾಗಿದೆ. |

## ಅನುಬಂಧ-02

## ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ

## ಗ್ರಾಮೀಣ ಕ್ರೀಡಾಪಟುಗಳು/ಬಾಲಕ:ಬಾಲಕಿಯರಿಗೆ ಜಾರಿಯಲ್ಲಿರುವ ಪ್ರಮುಖ ಕಾರ್ಯಕ್ರಮಗಳು

1. **ಕ್ರೀಡಾ ವಸತಿ ಶಾಲೆ/ನಿಲಯ**:

ರಾಜ್ಯದಾದ್ಯಂತ 32 ಕ್ರೀಡಾ ವಸತಿ ನಿಲಯ ಹಾಗೂ 02 ಕ್ರೀಡಾ ವಸತಿ ಶಾಲೆಗಳಿದ್ದು, ವೈಜ್ಞಾನಿಕ ಕ್ರೀಡಾ ತರಬೇತಿ, ಉಚಿತ ಊಟೋಪಹಾರ, ವಸತಿ ಮತ್ತು ಕ್ರೀಡಾ ಸಮವಸ್ತ್ರ ಒದಗಿಸಲಾಗುತ್ತಿದೆ.

2. **ಕ್ರೀಡಾ ವಿದ್ಯಾರ್ಥಿ ವೇತನ:**

ರಾಜ್ಯ ಮಟ್ಟದ ಕ್ರೀಡಾಕೂಟದಲ್ಲಿ ಪದಕ ವಿಜೇತರಾದ ಹಾಗೂ ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿದ ಶಾಲಾ ವಿದ್ಯಾರ್ಥಿಗಳಿಗೆ ರೂ 10,000 ಗಳ ವಿದ್ಯಾರ್ಥಿ ವೇತನ ನೀಡಿ ಪ್ರೋತ್ಸಾಹಿಸಲಾಗುತ್ತಿದೆ.

3. **ಶೈಕ್ಷಣಿಕ ಶುಲ್ಕ ಮರುಪಾವತಿ:**

ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ರಾಜ್ಯದಿಂದ ಪ್ರತಿನಿಧಿಸಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ವಾರ್ಷಿಕ ಗರಿಷ್ಟ ರೂ 50,000/- ವರೆಗೆ ಶೈಕ್ಷಣಿಕ ಶುಲ್ಕ ಮರುಪಾವತಿ ಮಾಡಲಾಗುತ್ತಿದೆ.

4. **ಕ್ರೀಡಾ ಸಾಧಕರಿಗೆ ನಗದು ಪುರಸ್ಕಾರ:**

ರಾಷ್ಟ್ರೀಯ ಮತ್ತು ಅಂತರ-ರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ಪದಕ ವಿಜೇತರಾದ ಕ್ರೀಡಾಪಟುಗಳಿಗೆ ಕೆಳಕಾಣಿಸಿದಂತೆ ನಗದು ಪುರಸ್ಕಾರವನ್ನು ನೀಡಲಾಗುತ್ತಿದೆ.

| ಕ್ರ.ಸ | ವಿವರ | ಚಿನ್ನದ ಪದಕ | ಬೆಳ್ಳಿಯ ಪದಕ | ಕಂಚಿನ ಪದಕ |
|---|---|---|---|---|
| 1 | ಒಲಂಪಿಕ್ಸ್ | 6.00 ಕೋಟಿ | 4.00 ಕೋಟಿ | 3.00 ಕೋಟಿ |
| 2 | ಏಷಿಯನ್ ಗೇಮ್ಸ್ | 35.00 ಲಕ್ಷ | 25.00 ಲಕ್ಷ | 15.00 ಲಕ್ಷ |
| 3 | ಕಾಮನ್‌ವೆಲ್ತ್ ಗೇಮ್ಸ್ | 35.00 ಲಕ್ಷ | 25.00 ಲಕ್ಷ | 15.00 ಲಕ್ಷ |
| 4 | ವಿಶ್ವ ಕಪ್/ಚಾಂಪಿಯನ್ ಶಿಪ್ | 5.00 ಲಕ್ಷ | 3.00 ಲಕ್ಷ | 2.00 ಲಕ್ಷ |
| 5 | ನ್ಯಾಷನಲ್ ಗೇಮ್ಸ್ | 5.00 ಲಕ್ಷ | 3.00 ಲಕ್ಷ | 2.00 ಲಕ್ಷ |
| 6 | ನ್ಯಾಷನಲ್ ಚಾಂಪಿಯನ್ ಶಿಪ್ (ಒಲಂಪಿಕ್ ಕ್ರೀಡೆಗಳಿಗೆ) | 2.00 ಲಕ್ಷ | 1.00 ಲಕ್ಷ | 50,000 |
| 7 | ಜೂನಿಯರ್ ನ್ಯಾಷನಲ್ (ಒಲಂಪಿಕ್ ಕ್ರೀಡೆಗಳಿಗೆ) | 50,000 | 25,000 | 15,000 |

| | | | | |
|---|---|---|---|---|
| 8 | ಸಬ್ ಜೂನಿಯರ್ ನ್ಯಾಷನಲ್ (ಒಲಂಪಿಕ್ ಕ್ರೀಡೆಗಳಿಗೆ) | 25,000 | 15,000 | 10,000 |

5. **ಪರಿಶಿಷ್ಟ ಜಾತಿ ಮತ್ತು ಪಂಗಡದ ಸಾಧಕ ಕ್ರೀಡಾಪಟುಗಳಿಗೆ ವಿಶೇಷ ನಗದು ಪುರಸ್ಕಾರ:**

ಅಂತಾರಾಷ್ಟ್ರೀಯ, ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ಕ್ರೀಡಾಕೂಟಗಳ ಪದಕ ವಿಜೇತರಿಗೆ ವಿಶೇಷ ನಗದು ಪುರಸ್ಕಾರ ನೀಡಲಾಗುತ್ತಿದೆ.

6. **ಕ್ರೀಡಾ ಪ್ರಶಸ್ತಿಗಳು:**

- **ಏಕಲವ್ಯ ಪ್ರಶಸ್ತಿ:** ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ರಾಜ್ಯವನ್ನು ಪ್ರತಿನಿಧಿಸಿ ಸಾಧನೆ ಮಾಡಿದ 15 ಕ್ರೀಡಾಪಟುಗಳಿಗೆ ಪ್ರತಿ ವರ್ಷ ತಲಾ ರೂ 4.00 ಲಕ್ಷ ನಗದು ಪುರಸ್ಕಾರ ಒಳಗೊಂಡ ರಾಜ್ಯದ ಅತ್ಯುನ್ನತ ಕ್ರೀಡಾ ಪ್ರಶಸ್ತಿಯಾದ ಏಕಲವ್ಯ ಪ್ರಶಸ್ತಿ ನೀಡಲಾಗುತ್ತಿದೆ.
- **ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿ:-** ಗ್ರಾಮೀಣ ಮತ್ತು ಪಾರಂಪರಿಕ ಕ್ರೀಡೆಗಳಲ್ಲಿ ವಿಶೇಷ ಸಾಧನೆ ಮಾಡಿದ ರಾಜ್ಯದ ಗ್ರಾಮೀಣ ಕ್ರೀಡಾಪಟುಗಳಿಗೆ ತಲಾ ರೂ 2.00 ಲಕ್ಷ ನಗದು ಪುರಸ್ಕಾರ ಒಳಗೊಂಡ ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ.

7. **ನಮ್ಮೂರ ಶಾಲೆಗೆ ನಮ್ಮ ಯುವಜನರು:**

ಅಧಿಕೃತ ಕ್ರೀಡಾಕೂಟಗಳಲ್ಲಿ ಉತ್ತಮ ಸಾಧನೆ ತೋರುವ ಕ್ರೀಡಾಪಟುಗಳನ್ನು ರೂಪಿಸುವ ಸರ್ಕಾರಿ ಶಾಲೆಗಳನ್ನು ಪ್ರತಿ ಜಿಲ್ಲೆಗೆ ಒಂದರಂತೆ ಗುರುತಿಸಿ ಆಯ್ಕೆಯಾದ ಶಾಲೆಗೆ ಪ್ರೋತ್ಸಾಹವಾಗಿ ತಲಾ ರೂ 1.00 ಲಕ್ಷದಂತೆ ಸರ್ಕಾರದಿಂದ ಪ್ರೋತ್ಸಾಹಧನವನ್ನು ನೀಡಲಾಗುವುದು.

8. **ಮೂಲಸೌಕರ್ಯಗಳ ಅಭಿವೃದ್ಧಿ:**

ರಾಜ್ಯದಾದ್ಯಂತ ಜಿಲ್ಲಾ ಮತ್ತು ತಾಲ್ಲೂಕು ಹೊರಾಂಗಣ ಕ್ರೀಡಾಂಗಣಗಳು, ಒಳಾಂಗಣ ಕ್ರೀಡಾಂಗಣಗಳು, ಈಜುಕೊಳಗಳು, ಸೈಕ್ಲಿಂಗ್ ವೆಲೋಡ್ರೋಮ್, ಸಿಂಥೆಟಿಕ್ ಅಥ್ಲೆಟಿಕ್ ಟ್ರ್ಯಾಕ್, ಸಿಂಥೆಟಿಕ್ ಹಾಕಿ ಟರ್ಫ್ ಮತ್ತಿತರ ಕ್ರೀಡಾ ಮೂಲಸೌಕರ್ಯಗಳನ್ನು ಕಲ್ಪಿಸಲಾಗುತ್ತಿದೆ.

9. **ಕ್ರೀಡಾಕೂಟಗಳ ಆಯೋಜನೆ:**

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಕ್ರೀಡಾಪಟುಗಳಿಗೆ ಕ್ರೀಡಾ ಸ್ಪರ್ಧೆಗಳಲ್ಲಿ ಭಾಗವಹಿಸಲು ಅವಕಾಶ ನೀಡುವ ಉದ್ದೇಶದಿಂದ ಕೆಳಕಾಣಿಸಿದ ಕ್ರೀಡಾಕೂಟಗಳನ್ನು ಆಯೋಜಿಸುತ್ತಿದೆ.

a) **ದಸರಾ ಕ್ರೀಡಾಕೂಟ ಸಿ.ಎಂ. ಕಪ್:** ತಾಲ್ಲೂಕು, ಜಿಲ್ಲೆ ಮತ್ತು ವಿಭಾಗ ಮಟ್ಟದಲ್ಲಿ ಸ್ಪರ್ಧೆಗಳನ್ನು ಆಯೋಜಿಸಿ, ಆಯ್ಕೆಯಾದವರಿಗೆ ಮೈಸೂರು ದಸರಾ ಮಹೋತ್ಸವದ ಸಂದರ್ಭದಲ್ಲಿ ರಾಜ್ಯ ಮಟ್ಟದ ದಸರಾ ಕ್ರೀಡಾಕೂಟ ಸಿ.ಎಂ. ಕಪ್ ಆಯೋಜಿಸಲಾಗುತ್ತಿದೆ. ಈ ಕ್ರೀಡಾಕೂಟದಲ್ಲಿ 3,000 ಕ್ಕೂ ಹೆಚ್ಚು ಕ್ರೀಡಾಪಟುಗಳು ಭಾಗವಹಿಸುತ್ತಾರೆ. ರಾಜ್ಯ ಮಟ್ಟದ ಸ್ಪರ್ಧೆಗಳಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ

ಉಚಿತ ಊಟೋಪಹಾರ, ವಸತಿ, ಕ್ರೀಡಾ ಕಿಟ್ ಹಾಗೂ ನಗದು ಪುರಸ್ಕಾರ ನೀಡಲಾಗುತ್ತಿದೆ. ಈ ಕ್ರೀಡಾಕೂಟದಲ್ಲಿ ಇತರೆ ಕ್ರೀಡೆಗಳೊಂದಿಗೆ ಗ್ರಾಮೀಣ ಕ್ರೀಡೆಗಳಾದ ಕುಸ್ತಿ, ಕಬಡ್ಡಿ, ಸೈಕ್ಲಿಂಗ್ ಮತ್ತಿತರ ಕ್ರೀಡಾ ಸ್ಪರ್ಧೆಗಳನ್ನು ಸಹ ಆಯೋಜಿಸಲಾಗುತ್ತಿದೆ.

b) **ಮಿನಿ ಕರ್ನಾಟಕ ಕ್ರೀಡಾಕೂಟ:** ಕರ್ನಾಟಕ ಒಲಿಂಪಿಕ್ ಸಂಸ್ಥೆಯ ಸಹಯೋಗದೊಂದಿಗೆ 14 ವರ್ಷ ವಯೋಮಾನದೊಳಗಿನ ಬಾಲಕ:ಬಾಲಕಿಯರಿಗೆ ಪ್ರತಿ ವರ್ಷ ಮಿನಿ ಕರ್ನಾಟಕ ಕ್ರೀಡಾಕೂಟದಲ್ಲಿ ವಿವಿಧ ಕ್ರೀಡಾ ಸ್ಪರ್ಧೆಗಳನ್ನು ಆಯೋಜಿಸಲಾಗುತ್ತಿದೆ. ಸ್ಪರ್ಧೆಗಳಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ಉಚಿತ ಊಟೋಪಹಾರ, ವಸತಿ, ಕ್ರೀಡಾ ಕಿಟ್ ನೀಡಲಾಗುತ್ತಿದೆ. ಈ ಕ್ರೀಡಾಕೂಟದಲ್ಲಿ ಇತರೆ ಕ್ರೀಡೆಗಳೊಂದಿಗೆ ಗ್ರಾಮೀಣ ಕ್ರೀಡೆಗಳಾದ ಕುಸ್ತಿ, ಕಬಡ್ಡಿ, ಸೈಕ್ಲಿಂಗ್ ಮತ್ತಿತರ ಕ್ರೀಡಾ ಸ್ಪರ್ಧೆಗಳನ್ನು ಸಹ ಆಯೋಜಿಸಲಾಗುತ್ತಿದೆ.

c) **ಕರ್ನಾಟಕ ಕ್ರೀಡಾಕೂಟ:** ಕರ್ನಾಟಕ ಒಲಿಂಪಿಕ್ ಸಂಸ್ಥೆಯ ಸಹಯೋಗದೊಂದಿಗೆ ಕರ್ನಾಟಕ ಕ್ರೀಡಾಕೂಟವನ್ನು ಪ್ರತಿ ವರ್ಷ ಆಯೋಜಿಸಲಾಗುತ್ತಿದ್ದು, 25ಕ್ಕೂ ಹೆಚ್ಚು ಕ್ರೀಡೆಗಳಲ್ಲಿ ಸ್ಪರ್ಧೆಗಳನ್ನು ಏರ್ಪಡಿಸಲಾಗುತ್ತಿದೆ. ಜನವರಿ-2026 ರಲ್ಲಿ ಕರ್ನಾಟಕ ಕ್ರೀಡಾಕೂಟವನ್ನು ತುಮಕೂರಿನಲ್ಲಿ ಆಯೋಜಿಸಲಾಗುವುದು. ಸ್ಪರ್ಧೆಗಳಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ಉಚಿತ ಊಟೋಪಹಾರ, ವಸತಿ, ಕ್ರೀಡಾ ಕಿಟ್ ನೀಡಲಾಗುತ್ತಿದೆ. ಈ ಕ್ರೀಡಾಕೂಟದಲ್ಲಿ ಇತರೆ ಕ್ರೀಡೆಗಳೊಂದಿಗೆ ಗ್ರಾಮೀಣ ಕ್ರೀಡೆಗಳಾದ ಕುಸ್ತಿ, ಕಬಡ್ಡಿ, ಸೈಕ್ಲಿಂಗ್ ಮತ್ತಿತರ ಕ್ರೀಡಾ ಸ್ಪರ್ಧೆಗಳನ್ನು ಸಹ ಆಯೋಜಿಸಲಾಗುತ್ತಿದೆ.

7. **'ಗುರಿ: ಒಲಿಂಪಿಕ್ ಪದಕ' ಯೋಜನೆ**

ರಾಜ್ಯದ ಅತ್ಯಂತ ಪ್ರತಿಭಾನ್ವಿತ 60 ಕ್ರೀಡಾಪಟುಗಳನ್ನು ಗುರುತಿಸಿ, 2028 ರ ಒಲಿಂಪಿಕ್ಸ್ ತಯಾರಿಗೆ ವಾರ್ಷಿಕ ತಲಾ ರೂ 10.00 ಲಕ್ಷ ಪ್ರೋತ್ಸಾಹ ಧನ ನೀಡಲಾಗುವುದು.

11. **ಕಂಬಳ, ಎತ್ತಿನ ಬಂಡಿ ಓಟ ಹಾಗೂ ಮಲ್ಲಕಂಭ ಕ್ರೀಡೆಗಳಿಗೆ ಉತ್ತೇಜನ:**

2025-26 ನೇ ಸಾಲಿನಲ್ಲಿ ಗ್ರಾಮೀಣ ಕ್ರೀಡೆಗಳಾದ ಕಂಬಳ, ಎತ್ತಿನ ಬಂಡಿ ಓಟ ಹಾಗೂ ಮಲ್ಲಕಂಭ ಕ್ರೀಡೆಗಳ ಆಯೋಜನೆಗೆ ರೂ 1.00 ಕೋಟಿ ಹಂಚಿಕೆ ಮಾಡಲಾಗಿದೆ.

12. **ಅರಣ್ಯಾಧಾರಿತ ಬುಡಕಟ್ಟು ವರ್ಗದವರಿಗೆ ಕ್ರೀಡಾಕೂಟ:**

2025-26 ನೇ ಸಾಲಿನಲ್ಲಿ ಅತೀ ಹಿಂದುಳಿದ ಅರಣ್ಯಾಧಾರಿತ ಬುಡಕಟ್ಟು ವರ್ಗದವರಿಗೆ ಕ್ರೀಡಾಕೂಟಗಳನ್ನು ಚಿಕ್ಕಮಗಳೂರು ಜಿಲ್ಲೆ, ಮೈಸೂರು ಜಿಲ್ಲೆ, ಚಾಮರಾಜನಗರ ಜಿಲ್ಲೆ ಹಾಗೂ ಕೊಡಗು ಜಿಲ್ಲೆಗಳಲ್ಲಿ ಆಯೋಜಿಸಲು ತಲಾ ರೂ 25.00 ಲಕ್ಷಗಳಂತೆ ಒಟ್ಟು ರೂ 1.00 ಕೋಟಿ ಹಂಚಿಕೆ ಮಾಡಲಾಗಿದ್ದು, ಶೀಘ್ರ ಕ್ರೀಡಾಕೂಟಗಳನ್ನು ಆಯೋಜಿಸಲಾಗುವುದು.